ಸದರಿ ರಸ್ತೆಯಲ್ಲಿ ದಿನಂಪ್ರತಿ ಸಾವಿರಾರು ವಾಹನಗಳು ಸಂಚರಿಸುತ್ತಿದ್ದು, ರಸ್ತೆಯು ತೀರಾ ಹದಗೆಟ್ಟು ವಾಹನಗಳ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸದರಿ ರಸ್ತೆಯನ್ನು ದುರಸ್ತಿಗೊಳಿಸಲು ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಹೌದು

ಆ) ಕಳೆದ ಸಾಲಿನಲ್ಲಿ ಸುಮಾರು 2.00 ಲಕ್ಷ ರೂಪಾಯಿಗಳು ಖರ್ಚು ಮಾಡಿ ರಸ್ತೆಯಲ್ಲಿಯ ಗುಂಡಿಗಳನ್ನು ಮುಚ್ಚಿ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗಿದೆ. ಈ ರಸ್ತೆಯ ದುರಸ್ತಿಗಾಗಿ ಈ ವರ್ಷದ ಆಯ-ವ್ಯಯದಲ್ಲಿ 20.00 ಲಕ್ಷಗಳನ್ನು ಕಾದಿರಿಸಲಾಗಿದೆ. ಮಳೆಗಾಲದ ನಂತರ ಈ ರಸ್ತೆಯನ್ನು ದುರಸ್ತಿ : ಡಾಂಬರೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಭರಮಸಾಗಾರದಲ್ಲಿ ಬಸ್ ನಿಲ್ದಾಣದ ಕಟ್ಟಡ

237 (1912) ಶ್ರೀ ಚಂದ್ರಪ್ಪ ಎಂ. (ಭರಮಸಾಗರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ತಾಲ್ಲೂಕು ಭರಮಸಾಗರದಲ್ಲಿ ರಾಷ್ಟ್ರೀಯ ಹೆದ್ದಾರಿ 4 ರಲ್ಲಿ ಬಸ್ ನಿಲ್ದಾಣ ಕಟ್ಟಲು ಶಂಕು ಸ್ಥಾಪನೆ ಮಾಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದನ್ನು ಪ್ರಾರಂಭಿಸಲು ಈಗಾಗಲೇ ಸರ್ಕಾರಕ್ಕೆ ಗ್ರಾಮ ಪಂಚಾಯತಿಯಿಂದ ಸ್ಥಳ ದಾನ ಮಾಡಿದ್ದು ಇನ್ನೂ ಉಳಿದ ಸ್ಥಳವನ್ನು ಜಿಲ್ಲಾಧಿಕಾರಿಗಳು 4 : 1 ಮೂಲಕ ಸ್ಥಳವನ್ನು ನೀಡಿದ್ದರೂ ಸಹ ಕಟ್ಟಡ ಕಟ್ಟದಿರಲು ಕಾರಣವೇನು;

ಇ) ಇದನ್ನು ಈಗಲಾದರೂ ಪ್ರಾರಂಭ ಮಾಡಲಾಗುವುದೆ?

ಶ್ರೀ ಬಿ. ರಮಾನಾಥ ರೈ (ಸಾರಿಗೆ ಸಚಿವರು) :

ಅ) ಬಂದಿದೆ.

ಆ) ಇನ್ನೂ ಉಳಿದ ಸ್ಥಳವನ್ನು ಸಂಸ್ಥೆಯ ವಶಕ್ಕೆ ಪಡೆದುಕೊಂಡಿರುವುದಿಲ್ಲ. ಸದರಿ ಉಳಿದ ಸ್ಥಳವನ್ನು ಪಡೆಯಲು ಕ್ರಮ ಜರುಗಿಸಲಾಗುತ್ತಿದೆ.

ಇ) ಸಂಸ್ಥೆಯ ಆರ್ಥಿಕ ಪರಿಸ್ಥಿತಿಗನುಗುಣವಾಗಿ ಕೆಲವನ್ನು ಕೈಗೊಳ್ಳಲು ಕ್ರಮ ಜರುಗಿಸಲಾಗುವುದು.

ಬೆಂಗಳೂರು ಗ್ರಾಮಾಂತರ ವಿಭಾಗೀಯ ಸಾರಿಗೆ ಸಂಸ್ಥೆಯಲ್ಲಿ ನಿಯಂತ್ರಣಾಧಿಕಾರಿಯವರಿಂದ ಕಿರುಕುಳ

238 (1764) ಶ್ರೀ ಶಿವಳ್ಳಿ ಚನ್ನಬಸಪ್ಪ ಸತ್ಯಪ್ಪ (ಕುಂದಗೋಳ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬೆಂಗಳೂರು ಗ್ರಾಮಾಂತರ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಎಂದಿನಿಂದ ಈ ಕಾರ್ಯಲಯಕ್ಕೆ ನಿಯಂತ್ರಣಾಧಿಕಾರಿಗಳಾಗಿ ನೇಮಕ ಗೊಂಡಿರುವರು.

ಆ) ಇವರು ಬಂದಂದಿನಿಂದ ಇದುವರೆಗೂ ವಿನಾಕಾರಣ ಸಣ್ಣ ಪುಟ್ಟ ಕಾರಣಗಳಿಗಾಗಿ ಎಷ್ಟು ಜನ ಸಿಬ್ಬಂದಿ ವರ್ಗದವರನ್ನು ಕೆಲಸದಿಂದ ಅಮಾನತ್ತು ಗೊಳಿಸಲಾಗಿದೆ ಹಾಗೂ ವಜಾ ಮಾಡಲಾಗಿದೆ.